**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಹಾಗೂ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) ಇವರ ನಿಯಮ 72ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

ರಾಜ್ಯದಲ್ಲಿ ಉತ್ತಮವಾಗಿ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿ:01-01-2016 ರಿಂದ ಪ್ರಸ್ತುತ ಅವಧಿಯವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಇದ್ದು ಸದರಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿದ್ದರು ಸಹ ನೇಮಕಾತಿ ಅನುಮೋದನೆ ಪ್ರಕ್ರಿಯೆ ಪ್ರಾರಂಭ ಮಾಡದೆ ಇರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ಸದರಿ ಖಾಲಿ ಹುದ್ದೆಗಳಲ್ಲಿ ವಯೋಮಿತಿ ಮೀರಿರುವ ಹಲವಾರು ಶಿಕ್ಷಕರು ಅನುದಾನಕ್ಕೊಳಪಡಸಬಹುದೆಂಬ ಆಸೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿ ಹುದ್ದೆಗಳನ್ನು ತುಂಬುವವರೆಗೆ ಸರ್ಕಾರಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿರುವಂತೆ ಅನುದಾನಿತ ಶಾಲೆಗಳಿಗೂ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿ ಸರ್ಕಾರದಿಂದಲೇ ವೇತನ ನೀಡಬೇಕು ಹಾಗೂ ಡಿಸೆಂಬರ್ 2025ರವರೆಗೆ ಅನುದಾನಿತ ಶಾಲೆಗಳಲ್ಲಿ ಖಾಲಿ ಆಗಿರುವ ಹುದ್ದೆಗಳನ್ನು ವೇತನಾನುದಾನಕ್ಕೊಳಪಡಿಸಬೇಕೆಂಬ ವಿಷಯವನ್ನು ನಿಯಮ 72 ರಲ್ಲಿ ಮಾನ್ಯ ಪ್ರಾಥಮಿಕ ಹಾಗು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇವೆ.

**ಉತ್ತರ**

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 01-01-2016 ರಿಂದ 31-12-2020ರ ಅವಧಿಯವರೆಗೆ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಈಗಾಗಲೇ ತಂತ್ರಾಂಶವನ್ನು ಸಿದ್ಧಪಡಿಸಲಾಗಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಬಿ.ಇ.ಓ ಹಂತ (ಮೊದಲನೇ ಹಂತ) ಮುಗಿದಿರುತ್ತದೆ ಹಾಗೂ ಶಾಲಾ ಆಡಳಿತ ಮಂಡಳಿಯವರ ಇಂಧೀಕರಣ ಕಾರ್ಯ (ಎರಡನೇ ಹಂತ) ಚಾಲ್ತಿಯಲ್ಲಿರುತ್ತದೆ.

ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟು ಹಾಗೂ ಸರ್ಕಾರದ ಮುಂದಿನ ಆದೇಶದವರೆಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ನೇಮಕಾತಿ ಅಧಿಸೂಚನೆಗಳನ್ವಯ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲು ಸಿಆಸು ಇಲಾಖೆಯು ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2026, ದಿನಾಂಕ: 27.02.2026ರಲ್ಲಿ ಹಲವು ಷರತ್ತುಗಳನ್ನು ವಿಧಿಸಿ, ಅದರನ್ವಯ ಕ್ರಮವಹಿಸುವಂತೆ ಎಲ್ಲಾ ನೇಮಕಾತಿ / ಆಯ್ಕೆ ಪ್ರಾಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದ್ದು, , ಈ ಆದೇಶದಲ್ಲಿ ಸೂಚಿಸಿರುವ ಷರತ್ತುಗಳನ್ವಯ ತಂತ್ರಾಂಶವನ್ನು ಮಾರ್ಪಡಿಸಲು ಆಯುಕ್ತಾಲಯದಿಂದ ಕ್ರಮವಹಿಸುತ್ತಿದ್ದು, ಶಾಲಾ ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ.

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿಯಿರುವ ಖಾಯಂ ಶಿಕ್ಷಕರ ಹುದ್ದೆಗಳ ಎದುರಾಗಿ ಕಾರ್ಯಭಾರಕ್ಕನುಗುವಣವಾಗಿ ಅತಿಥಿ ಶಿಕ್ಷಕ/ಉಪನ್ಯಾಸಕರನ್ನು ನೇಮಕಾತಿ ಮಾಡಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗದಂತೆ ಕ್ರಮಕೈಗೊಳ್ಳಲಾಗಿದೆ.

ಮುಂದುವರೆದು, ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿಯಿರುವ ಖಾಯಂ ಶಿಕ್ಷಕರ ಹುದ್ದೆಗಳನ್ನು ತುಂಬುವವರೆಗೆ ಕಾರ್ಯಭಾರಕ್ಕನುಗಣವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು, ಕಾರ್ಯ ನಿರ್ವಹಿಸಿದ ಅವಧಿಗೆ ಗೌರವ ಸಂಭಾವನೆಯನ್ನು ನೀಡಲಾಗುತ್ತದೆ. ಆದರೆ, ಅನುದಾನಿತ ಶಾಲೆಗಳಲ್ಲಿರುವ ಅತಿಥಿ ಶಿಕ್ಷಕರಿಗೆ ಸರ್ಕಾರದಿಂದಲೇ ವೇತನ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಹಾಗೂ ಇಂತಹ ಪ್ರಸ್ತಾವವು ಸರ್ಕಾರದ ಮುಂದಿರುವುದಿಲ್ಲ.

***************

**ಸಂಖ್ಯೆ: ಇಪಿ 79 ಎಸ್‌ಇಎಸ್ 2026**

(ಎಸ್. ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**